ಸಾಕ್ಷಿಗೆ ದಿನಾಂಕಃ **01.07.2024** ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಃ ವಾದಿ ಪರ ಶ್ರೀ.ಕೆಎಸ್ ಕೆ ವಕೀಲರಿಂದ

ನಾನು ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಈಗಾಗಲೇ ಸಲ್ಲಿಸುತ್ತಿದ್ದು, ಪ್ರಮಾಣಪತ್ರದಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯವಾಗಿದೆ ಎಂದು ಪ್ರಮಾಣೀಕರಿಸುತ್ತೇನೆ. ಪ್ರಮಾಣಪತ್ರವನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸದರಿ ಪ್ರಕರಣದಲ್ಲಿ ಮುಂದುವರೆದು ನಾನು ಹಾಜರುಪಡಿಸಿರುವ ದಾಖಲೆಗಳನ್ನು ಈಗ ನೋಡುತ್ತಿದ್ದೇನೆ, ಅವುಗಳನ್ನು ಈ ಕೆಳಕಂಡಂತೆ ಗುರುತಿಸಲಾಯಿತು.

1. ವಾದಿ ಮತ್ತು ತನ್ನ ನಡುವೆ ದಾವಾಸ್ವತ್ತಿಗೆ ಸಂಬಂಧಿಸಿ ಬೆಳೆ ಬೆಳೆಯಲು ಆಗಿರುವ ಕರಾರು ಪತ್ರವನ್ನು ನೋಡಿ ಗುರುತಿಸಿದ್ದು ಅದು ಈಗಾಗಲೇ ನಿಪಿ-25 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-25(ಎ) ಎಂದು, ವಾದಿಯ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-25(ಬಿ) ಎಂದು ಗುರುತಿಸಲಾಯಿತು. ಸದರಿ ನಿಪಿ-25 ರಲ್ಲಿ ಸಾಕ್ಷಿದಾರರು ರವಿಕುಮಾರ್, ಪುಟ್ಟಸ್ವಾಮಿ ಮತ್ತು ತಮ್ಮಯ್ಯ ಆಗಿರುತ್ತಾರೆ. ಸಾಕ್ಷಿಯು ಸದರಿ ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿದ್ದು ಕ್ರಮವಾಗಿ ನಿಪಿ-25(ಸಿ) ರಿಂದ (ಇ) ಎಂದು ಗುರುತಿಸಲಾಯಿತು. ಸದರಿ ಸಾಕ್ಷಿದಾರರು ವಾದಿ ಮತ್ತು ಪ್ರತಿವಾದಿಯ ಸಹೋದರರಾಗಿರುತ್ತಾರೆ.

ಆದ್ದರಿಂದ ದಾವೆಯನ್ನು ನನ್ನ ಪರವಾಗಿ ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

ಪಾಟೀಸವಾಲುಃ ಪ್ರತಿವಾದಿ ಪರ ಶ್ರೀ. ಹೆಚ್ ಎ ಎಸ್ ವಕೀಲರಿಂದ ಃ
ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.
(ದಿನಾಂಕಃ **01.07.2024** ರಂದು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

ಪ್ರ.ದ.ನ್ಯಾದಂಃ ನ.ರಾ.ಪುರ.

ಸಾಕ್ಷಿ ಸಹಿಃ